# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1325**

**ಸದಸ್ಯರ ಹೆಸರು : ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ)**

**ಉತ್ತರಿಸಬೇಕಾದ ದಿನಾಂಕ : 19.03.2025**

**ಉತ್ತರಿಸಬೇಕಾದ ಸಚಿವರು : ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು**

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಕೊಡಗು ಜಿಲ್ಲೆಯಲ್ಲಿ ಸ್ಥಾಪಿಸಿರುವ ಮೇಕೆ ಹಾಲು ಉತ್ಪಾದನಾ ಮತ್ತು ಸಂಸ್ಕರಣಾ ಘಟಕ ಕಾರ್ಯಾರಂಭ ಮಾಡಿದೆಯೇ: | ರಾಜ್ಯದ ಕೊಡಗು ಜಿಲ್ಲೆಯಲ್ಲಿ ಸ್ಥಾಪಿಸಿರುವ ಮೇಕೆ ಹಾಲು ಉತ್ಪಾದನಾ ಮತ್ತು ಸಂಸ್ಕರಣಾ ಘಟಕ ಕಾರ್ಯಾರಂಭಯಾಗಿರುವುದಿಲ್ಲ. |
| ಆ) | ಇದ್ದಲ್ಲಿ, ಯೋಜನಾ ವೆಚ್ಚ, ಉಪಕರಣಗಳ ಅಳವಡಿಕೆ ಕಾರ್ಯ ಸೇರಿದಂತೆ ಕಾಮಗಾರಿಗಳ ಪ್ರಸ್ತುತ ಸ್ಥಿತಿಗತಿ ಹಾಗೂ ಯೋಜನೆ ಕಾರ್ಯಗತವಾಗಿರುವ ಕುರಿತು ವಿವರ ನೀಡುವುದು: | ರಾಜ್ಯದ ಕೊಡಗು ಜಿಲ್ಲೆಯಲ್ಲಿ ಸ್ಥಾಪಿಸಿರುವ ಮೇಕೆ ಹಾಲು ಉತ್ಪಾದನಾ ಮತ್ತು ಸಂಸ್ಕರಣಾ ಘಟಕದ ಯೋಜನಾ ವೆಚ್ಚ ರೂ.480.00 ಲಕ್ಷಗಳು.<br><br>ಸಿವಿಲ್ ಕಾಮಗಾರಿಗಳನ್ನು ಪೂರ್ಣಗೊಳಿಸಿ, ಉಪಕರಣಗಳನ್ನು ಅಳವಡಿಸಲಾಗಿದೆ. 200+8 ಮೇಕೆ ಖರೀದಿ ಬಾಕಿ ಇರುತ್ತದೆ.<br><br>ಮೇಕೆ ಹಾಲು ಸಂಗ್ರಹಣೆ, ಸಂಸ್ಕರಣೆ ಹಾಗೂ ಮಾರಾಟಕ್ಕೆ ಪಿಪಿಪಿ (Public Private Partnership) ಮಾದರಿಯಲ್ಲಿ ಹೂಡಿಕೆದಾರರನ್ನು ನೇಮಿಸುವ ಸಲುವಾಗಿ ಕೆಟಿಪಿಪಿ ಕಾಯ್ದೆಯ ಅನುಸಾರ ಟೆಂಡರ್ ಕರೆಯಲಾಗಿದ್ದು, ಯಾವುದೇ ಸಂಸ್ಥೆಗಳು ಟೆಂಡರ್ ನಲ್ಲಿ ಭಾಗವಹಿಸಿರುವುದಿಲ್ಲ, ಪರಿಷ್ಕೃತ ಟೆಂಡರ್ ಅನ್ನು ಆಹ್ವಾನಿಸಲು ಕ್ರಮತೆಗೆದುಕೊಳ್ಳಲಾಗುತ್ತಿದೆ. |

| | | |
|---|---|---|
| ಇ) | ರಾಜ್ಯದಲ್ಲಿ ಹೈನುಗಾರಿಕೆಯಂತೆ ಮೇಕೆ ಹಾಲಿಗೂ ಬೇಡಿಕೆ ಇದೆಯೇ; ಬೇಡಿಕೆ ಇದ್ದಲ್ಲಿ, ಈ ಬಗ್ಗೆ ಸಂಪೂರ್ಣ ಮಾಹಿತಿ ನೀಡುವುದು; | ರಾಜ್ಯದಲ್ಲಿ ಹೈನುಗಾರಿಕೆಯಂತೆ ಮೇಕೆ ಹಾಲಿಗೆ ಬೇಡಿಕೆ ಕಡಿಮೆ ಇರುತ್ತದೆ. |
| ಈ) | ಮೇಕೆ ಸಾಕಣೆ, ತಳಿ ಅಭಿವೃದ್ಧಿ, ಮೇವು ಅಭಿವೃದ್ಧಿ, ರೈತರಿಗೆ ತರಬೇತಿ, ಮೇಕೆ ಹಾಲಿಗೆ ಮಾರುಕಟ್ಟೆ ಒದಗಿಸುವುದು ದರ ನಿಗದಿ ಸೇರಿದಂತೆ ಇನ್ನಿತರೆ ಚಟುವಟಿಕೆಗಳ ಮೂಲಕ 'ಮೇಕೆ ಹಾಲು ಉತ್ಪಾದನೆ' ಹೆಚ್ಚಿಸಲು ಮತ್ತು ಜನಪ್ರಿಯಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ಸಂಪೂರ್ಣ ಮಾಹಿತಿ ನೀಡುವುದು) | ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿಯಮಿತದ ಅಧೀನದಲ್ಲಿ ಬರುವ ಕ್ಷೇತ್ರಗಳಲ್ಲಿ ಮೇಕೆ ಸಾಕಾಣಿಕೆಗೆ ಒತ್ತು ನೀಡಲಾಗಿದ್ದು, ಮೇಕೆ ತಳಿ ಸಂವರ್ಧನಾ ಕೇಂದ್ರ ಅನಗವಾಡಿ, ಬಾಗಲಕೋಟೆ ಜಿಲ್ಲೆ ಇಲ್ಲಿ ಓಸ್ಮನಾಬಾದಿ ಮೇಕೆ ತಳಿಯನ್ನು ಅಭಿವೃದ್ಧಿಪಡಿಸಿ ರೈತರಿಗೆ ರಿಯಾಯಿತಿ ದರದಲ್ಲಿ ಹೋತಗಳನ್ನು (ಗಂಡು ಮೇಕೆ) ನೀಡಲಾಗುತ್ತಿದೆ.<br><br>ಮೇವು ಅಭಿವೃದ್ಧಿಗಾಗಿ ರಾಜ್ಯಾದ್ಯಂತ ರೈತರಿಗೆ ಸುಧಾರಿತ ಮೇವಿನ ಬೀಜದ ಕಿರುಪೊಟ್ಟಣಗಳನ್ನು ವಿತರಿಸಲಾಗುತ್ತಿದೆ.<br><br>ಆಸಕ್ತ ರೈತರಿಗೆ ಮೇಕೆ ಸಾಕಾಣಿಕೆಗೆ ನಿಗಮ ಮತ್ತು ಇಲಾಖೆವತಿಯಿಂದ ಜಿಲ್ಲಾ ಮಟ್ಟದಲ್ಲಿ ತರಬೇತಿ ನೀಡಲಾಗುತ್ತಿದೆ.<br><br>ಹೈನುಗಾರಿಕೆಯಂತೆ ಮೇಕೆ ಹಾಲಿಗೆ ಬೇಡಿಕೆ ಇಲ್ಲದಿರುವುದರಿಂದ ಮೇಕೆ ಹಾಲು ಉತ್ಪಾದನೆ ಹೆಚ್ಚಿಸಲು, ಮಾರುಕಟ್ಟೆ ಒದಗಿಸಲು ಮತ್ತು ಜನಪ್ರಿಯಗೊಳಿಸಲು ಕರಪತ್ರ, ಭಿತ್ತಿಪತ್ರ ಹಾಗೂ ದೂರದರ್ಶನದ ಮೂಲಕ ಪ್ರಚಾರ ಕೈಗೊಳ್ಳಲಾಗುತ್ತಿದೆ. |

**ಸಂಖ್ಯೆ:ಪಸಂಮೀ 95 ಸಲೆವಿ 2025**

**(ಕೆ.ವೆಂಕಟೇಶ್)**
ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು